# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1731 (1975) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 24.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿ ನಿರುದ್ಯೋಗ ಹೆಚ್ಚಾಗಲು ಪ್ರಮುಖ ಕಾರಣಗಳೇನು; | ರಾಜ್ಯದಲ್ಲಿ ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿ ನಿರುದ್ಯೋಗ ಹೆಚ್ಚಾಗಲು ಕೌಶಲ್ಯದ ಹೊಂದಾಣಿಕೆಯ ಕೊರತೆ ಮತ್ತು ಉತ್ಪಾದನಾ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ, ರೊಬೋಟಿಕ್ಸ್ ಮತ್ತು ಆಟೋಮೇಷನ್ ತ್ವರಿತ ಅಳವಡಿಕೆಯು ಇತ್ಯಾದಿ ಕಾರಣಗಳಾಗಿವೆ. |
| ಆ | ದೊಡ್ಡ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಲ್ಲಿನ ನಿರುದ್ಯೋಗವನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ; | ಕೈಗಾರಿಕೆ ನೀತಿ 2025-30 ರನ್ವಯ 2030 ರೊಳಗಾಗಿ 20 ಲಕ್ಷ ಜನರಿಗೆ ಉದ್ಯೋಗಗಳನ್ನು ಸೃಷ್ಟಿಸುವ ಹಾಗೂ ಅದಕ್ಕಾಗಿ ಎಲ್ಲಾ ವಲಯಗಳ ಆಸಕ್ತಿಯನ್ನು ಉತ್ತೇಜಿಸಲು ಗುರಿ ಹೊಂದಿದೆ. ಅಲ್ಲದೇ, ರಾಜ್ಯದಲ್ಲಿ ಹೆಚ್ಚಿನ ಕೈಗಾರಿಕೆಗಳನ್ನು ಸ್ಥಾಪಿಸಲು ಕಾಲ-ಕಾಲಕ್ಕೆ ಕೈಗಾರಿಕಾ ನೀತಿ ಮತ್ತು ವಿವಿಧ ವಲಯ ಕಾರ್ಯಕ್ರಮಗಳನ್ನು ಜಾರಿಗೆ ತಂದು ನಿರುದ್ಯೋಗ ಪರಿಹರಿಸಲು ಕ್ರಮವಹಿಸಲಾಗುತ್ತಿದೆ.<br><br>ಕೈಗಾರಿಕಾ ನೀತಿಯನ್ವಯ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡುವ ಸಂದರ್ಭದಲ್ಲಿ ಒಟ್ಟಾರೆಯಾಗಿ ಕನಿಷ್ಟ 70 ರಷ್ಟು ಹಾಗೂ ಗ್ರೂಪ್-ಡಿ ವರ್ಗದಲ್ಲಿ ಶೇ.100 ರಷ್ಟು ಉದ್ಯೋಗ ನೀಡಿದ್ದಲ್ಲಿ, ಪರಿಶೀಲಿಸಿ ರಿಯಾಯಿತಿ ಹಾಗೂ ಪ್ರೋತ್ಸಾಹಕಗಳನ್ನು ನೀಡಲಾಗುತ್ತದೆ. ಇದರಿಂದ, ನಿರುದ್ಯೋಗ ಸಮಸ್ಯೆ ಕಡಿಮೆಯಾಗುತ್ತದೆ. |
| ಇ | ರಾಜ್ಯದಲ್ಲಿ ಉದ್ಯೋಗ ಸೃಷ್ಟಿಗೆ MSME ಗಳು ಮತ್ತು ದೊಡ್ಡ ಕೈಗಾರಿಕೆಗಳು ಹೇಗೆ ವಿಭಿನ್ನವಾಗಿ ಕೊಡುಗೆ ನೀಡುತ್ತಿವೆ; ಮಾಹಿತಿ ನೀಡುವುದು; | ರಾಜ್ಯದಲ್ಲಿನ MSME ಉದ್ಯಮಗಳ ನೋಂದಣಿಯನ್ನು ಭಾರತ ಸರ್ಕಾರದ ಉದ್ಯಮ್ ತಂತ್ರಾಂಶದಲ್ಲಿ ಮಾಡಲಾಗುತ್ತಿದೆ.<br><br>ಬೃಹತ್ ಕೈಗಾರಿಕೆಗಳು ಕೇಂದ್ರ ಸರ್ಕಾರದಿಂದ IEM ಪಡೆಯುತ್ತವೆ.<br><br>MSME ಗಳಲ್ಲಿ ದೊಡ್ಡ ಕೈಗಾರಿಕೆಗಳಿಗಿಂತ ಹೆಚ್ಚಿನ ಉದ್ಯೋಗವಕಾಶ ಸೃಜನೆಯಾಗುತ್ತಿದೆ. |
| ಈ | ರಾಜ್ಯದಿಂದ ಕೈಗಾರಿಕೆಗಳ ಮುಚ್ಚುವಿಕೆ ಅಥವಾ ಸ್ಥಳಾಂತರವು ಸ್ಥಳೀಯ ಉದ್ಯೋಗದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು; | ರಾಜ್ಯದಿಂದ ಕೈಗಾರಿಕೆಗಳ ಮುಚ್ಚುವಿಕೆ ಅಥವಾ ಸ್ಥಳಾಂತರಗೊಳಿಸಿರುವ ಕುರಿತು ವರದಿಯಿರುವುದಿಲ್ಲ. |

| | | |
|---|---|---|
| ಉ | ರಾಜ್ಯದಲ್ಲಿ ಹೆಚ್ಚಿನ ಸ್ಥಳೀಯ ಉದ್ಯೋಗಗಳನ್ನು ಸೃಷ್ಟಿಸಲು ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಮತ್ತು ನಿರುದ್ಯೋಗ ಸಮಸ್ಯೆ ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು) | ರಾಜ್ಯದಲ್ಲಿ ಹೆಚ್ಚಿನ ಕೈಗಾರಿಕೆಗಳನ್ನು ಸ್ಥಾಪಿಸಲು ಕಾಲ-ಕಾಲಕ್ಕೆ ಕೈಗಾರಿಕಾ ನೀತಿ ಮತ್ತು ವಿವಿಧ ವಲಯ ಕಾರ್ಯಕ್ರಮಗಳನ್ನು ಜಾರಿಗೆ ತಂದು ನಿರುದ್ಯೋಗ ಪರಿಹರಿಸಲು ಕ್ರಮ ವಹಿಸಲಾಗುತ್ತಿದೆ. |

**ಸಿಐ 69 ಎಸ್‌ಪಿಐ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು